# ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
# Bangalore Development Authority

ಸಂಖ್ಯೆ : ಬೆಂಅಪ್ರಾ/ನಯೋ/PRL-16/2018/2025-26
No. E-Office No. 132743

ದಿನಾಂಕ : 25/08/2025
Date :

## "ವಸತಿ ಉದ್ದೇಶದ ಏಕ ನಿವೇಶನ ವಿನ್ಯಾಸ ನಕ್ಷೆ ಅನುಮೋದನೆ ಆದೇಶ"

[ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17 ರ ಅಡಿಯಲ್ಲಿ]

**ವಿಷಯ:-** ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಹಾಡೋ ಸಿದ್ದಾಪುರ ಗ್ರಾಮದ ಸರ್ವೆ ನಂ. 56 ರಲ್ಲಿ 3ಎ-15ಗುಂ ವಿಸ್ತೀರ್ಣದ ಪೈಕಿ ಸ್ಥಳದಲ್ಲಿ ಲಭ್ಯವಿರುವಂತೆ 3ಎ-12.3ಗುಂ ಪ್ರದೇಶಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17 ರ ಅಡಿಯಲ್ಲಿ ವಸತಿ ಉದ್ದೇಶದ ಏಕ ನಿವೇಶನ ವಿನ್ಯಾಸ ನಕ್ಷೆಗೆ M/s. Sobha Limited GPA Holder for Smt. Kumudha Kumar Babu Regd & Corporate Office ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.

**ಉಲ್ಲೇಖ:**
1. M/s. Sobha Limited GPA Holder for Smt. Kumudha Kumar Babu Regd & Corporate Office ರವರ ಅರ್ಜಿ ದಿನಾಂಕ 07.04.2025.
2. ಪ್ರಾಧಿಕಾರದ ಸಭೆಯ ಟಿಪ್ಪಣಿ ಸಂಖ್ಯೆ 181/24, ದಿನಾಂಕ 29.10.2024.
3. ಈ ಕಛೇರಿ ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/PRL-16/452/2025-26, ದಿನಾಂಕ 06.05.2025.
4. ಈ ಕಛೇರಿ ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/PRL-16/905/2025-26, ದಿನಾಂಕ 28.05.2025.
5. ಕೆನರಾ ಬ್ಯಾಂಕ್ ಚಲನ್ ನಂ. GN25062151, ದಿನಾಂಕ 02.06.2025.
6. ಈ ಕಛೇರಿಯ ಪತ್ರ ಸಂಖ್ಯೆ: ಬೆಂಅಪ್ರಾ/ನಯೋಸ/PRL-16//2025-26, ದಿನಾಂಕ 21.07.2025.
7. ದಿನಾಂಕ 19.07.2025 ರಂದು ಜರುಗಿದ ಪ್ರಾಧಿಕಾರದ ಸಭೆಯ ವಿಷಯ ಸಂಖ್ಯೆ (C) ರ ತೀರ್ಮಾನ.
8. ಅರ್ಜಿದಾರರ ಮನವಿ ಪತ್ರ ದಿನಾಂಕ 30.07.2025.

******

ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಹಾಡೋ ಸಿದ್ದಾಪುರ ಗ್ರಾಮದ ಸರ್ವೆ ನಂ. 56 ರಲ್ಲಿ 3ಎ-15ಗುಂ ವಿಸ್ತೀರ್ಣದ ಪೈಕಿ ಸ್ಥಳದಲ್ಲಿ ಲಭ್ಯವಿರುವಂತೆ 3ಎ-12.3ಗುಂ ಪ್ರದೇಶಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17 ರ ಅಡಿಯಲ್ಲಿ ವಸತಿ ಉದ್ದೇಶದ ಏಕ ನಿವೇಶನ ವಸತಿ ವಿನ್ಯಾಸ ನಕ್ಷೆ ಅನುಮೋದನೆ ನೀಡಲು ಉಲ್ಲೇಖ [1] ರ ಅರ್ಜಿಯಲ್ಲಿ ಕೋರಿರುತ್ತಾರೆ.

ಉಲ್ಲೇಖ [2] ರ ಪ್ರಾಧಿಕಾರದ ಟಿಪ್ಪಣಿಯಲ್ಲಿ ಏಕ ನಿವೇಶನ ವಿನ್ಯಾಸ ನಕ್ಷೆ ಅನುಮೋದನೆಯ ಅಧಿಕಾರವನ್ನು ಮಾನ್ಯ ಅಧ್ಯಕ್ಷರು ಹಾಗೂ ಆಯುಕ್ತರಿಗೆ ಪ್ರತ್ಯಾಯೋಜಿಸಲಾಗಿರುತ್ತದೆ. ಅದರಂತೆ ಪ್ರಸ್ತಾವನೆಯನ್ನು ಪರಿಶೀಲಿಸಿ ಅನುಮೋದನೆಗಾಗಿ ಮಂಡಿಸಲಾಗಿದ್ದು, ದಿನಾಂಕ 23.05.2025 ರಂದು ಮಾನ್ಯ ಅಧ್ಯಕ್ಷರು ಮತ್ತು ಮಾನ್ಯ ಆಯುಕ್ತರವರಿಂದ ಅನುಮೋದಿಸಲಾಗಿರುತ್ತದೆ.

ಉಲ್ಲೇಖ [3] ರಲ್ಲಿ ನಮೂದಿಸಿರುವ ಈ ಕಛೇರಿ ಪತ್ರದಲ್ಲಿ ಸರ್ಕಾರದ ಸುತ್ತೋಲೆ ಸಂಖ್ಯೆ:ನಅಇ 363 ಬಿಎಂಆರ್ 202 (ಇ), ದಿನಾಂಕ 12.02.2024 ರ ಅನುಸಾರ ಪ್ರಸ್ತಾವನೆಯಲ್ಲಿ ಒಳಗೊಂಡಿರುವ ಜಮೀನುಗಳ ಕುರಿತು ಯಾವುದೇ ವ್ಯಾಜ್ಯ / ಪ್ರಕರಣ / ತಕರಾರುಗಳು ಇದ್ದಲ್ಲಿ 15 ದಿನಗಳೊಳಗಾಗಿ ಮಾಹಿತಿ ನೀಡಲು ದಿನಾಂಕ 30.05.2025 ರಂದು ತಹಶೀಲ್ದಾರ್ ರವರು ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ರವರಿಗೆ ಪತ್ರ ಬರೆಯಲಾಗಿರುತ್ತದೆ. ನಿಗದಿತ ಅವಧಿಯೊಳಗೆ ತಹಶೀಲ್ದಾರ್ ರವರ ಕಛೇರಿಯಿಂದ ಯಾವುದೇ ಮಾಹಿತಿ ಸ್ವೀಕೃತವಾಗಿರುವುದಿಲ್ಲ, ಕಾರಣ ಪ್ರಶ್ನಿತ ಜಮೀನುಗಳ ಕುರಿತು ಯಾವುದೇ ವ್ಯಾಜ್ಯ / ಪ್ರಕರಣ / ತಕರಾರುಗಳು ಇರುವುದಿಲ್ಲವೆಂದು ಪರಿಗಣಿಸಲಾಗಿರುತ್ತದೆ.

ಮುಂದುವರೆದು, ವಸತಿ ಉದ್ದೇಶದ ಏಕ ನಿವೇಶನ ವಿನ್ಯಾಸ ನಕ್ಷೆ ಅನುಮೋದನೆ ಸಂಬಂಧ ಪಾವತಿಸಬೇಕಾದ ವಿವಿಧ ಶುಲ್ಕಗಳ ಬಾಬ್ತು ಒಟ್ಟು ರೂ. 37,55,150/- [ರೂ. ಮುವತ್ತೇಳು ಲಕ್ಷದ ಐವತ್ತೈದು ಸಾವಿರದ ಒಂದು ನೂರ ಐವತ್ತು ಮಾತ್ರ] ಗಳನ್ನು ಪ್ರಾಧಿಕಾರಕ್ಕೆ ಪಾವತಿಸುವಂತೆ ತಿಳಿಸಿ, ಉಲ್ಲೇಖ (4) ರಂತೆ ಅರ್ಜಿದಾರರಿಗೆ ಪತ್ರ ಬರೆಯಲಾಗಿರುತ್ತದೆ. ಅದರಂತೆ ಉಲ್ಲೇಖ (5) ರಲ್ಲಿ ನಮೂದಿಸಿರುವ ಪ್ರಾಧಿಕಾರದ ಕೆನರಾ ಬ್ಯಾಂಕ್ ಶಾಖೆಯಲ್ಲಿ ಚಲನ್ ನಂ. GN25062151ನ್ನು ರಲ್ಲಿ ಅರ್ಜಿದಾರರು ಸದರಿ ಮೊತ್ತವನ್ನು ದಿನಾಂಕ 02.06.2025 ರಂದು ಪಾವತಿಸಿರುವ ಬಗ್ಗೆ ಬ್ಯಾಂಕ್ ನಿಂದ ನೀಡಿರುವ ಚಲನ್ ಪ್ರತಿಯನ್ನು ಸಲ್ಲಿಸಿರುತ್ತಾರೆ.

ಉಲ್ಲೇಖ (6) ರ ಪತ್ರದಲ್ಲಿ ಪ್ರಶ್ನಿತ ಜಮೀನು ಭಾಗಶಃ ವಸತಿ ಮತ್ತು ವಾಣಿಜ್ಯ ಉದ್ದೇಶಗಳಿಗಾಗಿ ಭೂಪರಿವರ್ತನೆಯಾಗಿದ್ದು, ಈ ಪೈಕಿ ವಾಣಿಜ್ಯ ಉಪಯೋಗದ ಅಡಿಯಲ್ಲಿ ಭೂಪರಿವರ್ತನೆಗೊಂಡಿರುವ ಜಮೀನನ್ನು ಪುನಃ ವಸತಿ ಉದ್ದೇಶದ ಮಾರ್ಪಡಿತ ಭೂಪರಿವರ್ತನಾ ಆದೇಶ ಸಲ್ಲಿಸುವಂತೆ ಅರ್ಜಿದಾರರಿಗೆ ಸೂಚಿಸಲಾಗಿರುತ್ತದೆ. ಅದರಂತೆ ಅರ್ಜಿದಾರರು ಉಲ್ಲೇಖ (8) ರ ಪತ್ರದಲ್ಲಿ ವಸತಿ ಉದ್ದೇಶದ ಮಾರ್ಪಡಿತ ಭೂಪರಿವರ್ತನಾ ಆದೇಶದ ಪ್ರತಿಯನ್ನು ಸಲ್ಲಿಸಿರುತ್ತಾರೆ.

ಉಲ್ಲೇಖ (7) ರ ಸಮಿತಿ ಸಭೆಯ ತೀರ್ಮಾನದಂತೆ *"ವಲಯ ನಿಯಮಾವಳಿಗಳಿಗೆ ತಿದ್ದುಪಡಿ ಅಧಿಸೂಚನೆಯನ್ನು ದಿನಾಂಕ 17.07.2025 ರಂದು ಅಧಿಸೂಚಿಸಲಾಗಿದ್ದು, ಸದರಿ ದಿನಾಂಕದವರೆವಿಗೂ ಮಾನ್ಯ ಆಯುಕ್ತರು ಮತ್ತು ಅಧ್ಯಕ್ಷರಿಂದ ಕಡತದ ಟಿಪ್ಪಣಿಯಲ್ಲಿ ಅನುಮೋದನೆಯಾಗಿರುವ ಪ್ರಕರಣಗಳಿಗೆ ತಿದ್ದುಪಡಿ ವಲಯ ನಿಯಮಾವಳಿಗಳು ಅನ್ವಯಿಸದೇ ಈ ಹಿಂದೆ ಅನುಸರಿಸುತ್ತಿದ್ದ ವಿಧಾನದಲ್ಲಿಯೇ*

*ಅನುಮೋದಿಸಲು ತೀರ್ಮಾನಿಸಲಾಗಿರುತ್ತದೆ."* ಪ್ರಕರಣವನ್ನು ಆಯುಕ್ತರು ಮತ್ತು ಅಧ್ಯಕ್ಷರು ದಿನಾಂಕ 23.05.2025 ರಂದು ಕಡತದಲ್ಲಿ ಟಿಪ್ಪಣಿಯನ್ನು ಅನುಮೋದಿಸಿರುತ್ತಾರೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ತತ್ಸಂಬಂಧ ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಬೆಂಅಪ್ರಾ/ನಯೋ/PRL-16/2018 /2025-26 ದಿನಾಂಕ 25 /08/2025**

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಹಾಡೋ ಸಿದ್ದಾಪುರ ಗ್ರಾಮದ ಸರ್ವೆ ನಂ. 56 ರಲ್ಲಿ 3ಎ-15ಗುಂ ವಿಸ್ತೀರ್ಣದ ಪೈಕಿ ಸ್ಥಳದಲ್ಲಿ ಲಭ್ಯವಿರುವಂತೆ 3ಎ-12.3ಗುಂ ಪ್ರದೇಶಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17 ರ ಅಡಿಯಲ್ಲಿ ಏಕ ನಿವೇಶನ ವಸತಿ ವಿನ್ಯಾಸ ನಕ್ಷೆಗೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಅನುಮೋದನೆ ನೀಡಲಾಗಿದೆ.

| | |
|---|---|
| 1 | ಅನುಮೋದಿತ ಏಕ ನಿವೇಶನ ವಸತಿ ವಿನ್ಯಾಸ ನಕ್ಷೆಯ ಅನುಸಾರ ಕಟ್ಟಡ ನಕ್ಷೆಗಳಿಗೆ ಸಕ್ಷಮ ಪ್ರಾಧಿಕಾರದಿಂದ ಕಡ್ಡಾಯವಾಗಿ ಅನುಮೋದನೆ ಪಡೆದು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳತಕ್ಕದ್ದು. |
| 2 | ಏಕನಿವೇಶನ ವಸತಿ ವಿನ್ಯಾಸ ನಕ್ಷೆಯಲ್ಲಿ ಕಾಯ್ದಿರಿಸಿರುವ ಉದ್ಯಾನವನ / ಬಯಲುಜಾಗದ ಪ್ರದೇಶವು ಸೇರಿದಂತೆ ಹಾಗೂ ಅಭಿವೃದ್ಧಿಪಡಿಸಲು ಉದ್ದೇಶಿಸಿರುವ ಕಟ್ಟಡದ ಒಟ್ಟು ಫ್ಲೋರ್ ವಿಸ್ತೀರ್ಣದ ಪ್ರತಿ 240.0 ಚ.ಮೀ FAR (Builtup Area) ಪ್ರದೇಶಕ್ಕೆ ಒಂದು ಮರದಂತೆ ವಿವಿಧ ಜಾತಿಯ ಗಿಡಮರಗಳನ್ನು ಬೆಳೆಸುವುದು. ಕಟ್ಟಡ ಸ್ವಾಧೀನ ಪತ್ರ ನೀಡುವ ಸಕ್ಷಮ ಪ್ರಾಧಿಕಾರವು ಸ್ವಾಧೀನ ಪತ್ರ ನೀಡುವ ಸಂದರ್ಭದಲ್ಲಿ ಸದರಿ ಗಿಡಮರಗಳ ಕನಿಷ್ಠ 2.00 ಮೀ ಎತ್ತರ ಇರುವುದನ್ನು ಖಚಿತಪಡಿಸಿಕೊಳ್ಳುವುದು. |
| 3 | ಏಕ ನಿವೇಶನ ವಸತಿ ವಿನ್ಯಾಸ ನಕ್ಷೆ ಅನುಮೋದನೆಯಾದ ನಂತರ, ಉಪವಿಭಜಿಸಲು ಅಥವ ಬಹು ನಿವೇಶನ ರಚಿಸಲು ಇಚ್ಛಿಸಿದ್ದಲ್ಲಿ ಪ್ರಾಧಿಕಾರಕ್ಕೆ ಮನವಿ ಸಲ್ಲಿಸಿ, ಬಹು ನಿವೇಶನ ವಿನ್ಯಾಸ ನಕ್ಷೆಯನ್ನು ವಲಯ ನಿಯಮಾವಳಿಗಳ ಅನುಸಾರ ಅನುಮೋದನೆ ಕಡ್ಡಾಯವಾಗಿ ಪಡೆಯತಕ್ಕದ್ದು. |
| 4 | ಅನುಮೋದಿತ ಏಕ ನಿವೇಶನ ನಕ್ಷೆಯಂತೆಯೇ ಅಭಿವೃದ್ಧಿ ಕಾರ್ಯಗಳನ್ನು ಕಾರ್ಯಗತ ಮಾಡುವುದು, ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಯಾವುದೇ ಬದಲಾವಣೆಗಳನ್ನು ಮಾಡುವಂತಿಲ್ಲ. |
| 5 | ಪ್ರಶ್ನಿತ ನಿವೇಶನಕ್ಕೆ ಕುಡಿಯುವ ನೀರು, ತ್ಯಾಜ್ಯ ನೀರು ವಿಲೇವಾರಿ, ಒಳಚರಂಡಿ ವ್ಯವಸ್ಥೆಯನ್ನು ಅರ್ಜಿದಾರರೇ ಕೊಳಚೆ ನೀರನ್ನು ಬಯಲು ಜಾಗ / ಖಾಲಿ ಜಾಗಗಳಿಗೆ ಬಿಡದೇ ಸಂಸ್ಕರಿಸಿ |

| | |
|---|---|
| | ಕುಡಿಯುವ ನೀರಿನ ಹೊರತಾಗಿ ಉಳಿದ ಬಳಕೆಗಾಗಿ ಉಪಯೋಗಿಸತಕ್ಕದ್ದು ಹಾಗೂ ಉದ್ದೇಶಿತ ವಿನ್ಯಾಸದಲ್ಲಿ, ಒಟ್ಟು ಕ್ಷೇತ್ರದಲ್ಲಿ ಬೀಳುವ ಮಳೆನೀರು ವ್ಯರ್ಥವಾಗಿ ಹೋಗದಂತೆ ಭೂಮಿಯ ಒಳಗಡೆ ಇಂಗುವಂತೆ ಅಗತ್ಯ ಕ್ರಮವಹಿಸತಕ್ಕದ್ದು. ಘನ ತ್ಯಾಜ್ಯಗಳನ್ನು, ಹಸಿತ್ಯಾಜ್ಯ, ಒಣತ್ಯಾಜ್ಯ, ಪ್ಲಾಸ್ಟಿಕ್ ಮತ್ತು ಇತ್ಯಾದಿ ವಿಂಗಡಿಸಿ. Compost ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು. |
| 6 | ಪ್ರಸ್ತಾವನೆಗೆ ಸಲ್ಲಿಸಿರುವ ದಾಖಲೆಗಳ ಆಧಾರದ ಮೇಲೆ ತಾಂತ್ರಿಕ ಅನುಮೋದನೆ ನೀಡಿರುವುದರಿಂದ, ಪ್ರಸ್ತಾವನೆಗೆ ಸಂಬಂಧಿಸಿದಂತೆ ಅರ್ಜಿದಾರರು ಸುಳ್ಳು ದಾಖಲೆ ಅಥವಾ ಇನ್ನಿತರೆ ಫೋರ್ಜರಿ ದಾಖಲಾತಿಗಳನ್ನು ನೀಡಿರುವುದು ರುಜುವಾತಾದಲ್ಲಿ ಈಗ ನೀಡಿರುವ ಏಕ ನಿವೇಶನ ವಿನ್ಯಾಸ ನಕ್ಷೆ ಅನುಮೋದನೆಯು ತನ್ನಿಂದತಾನೆ ರದ್ದಾಗುವುದೆಂದು ಭಾವಿಸತಕ್ಕದ್ದು. |
| 7 | ಈ ಅನುಮೋದನೆ ದಾಖಲೆಯನ್ನು ಮಾಲೀಕತ್ವವನ್ನು ನಿರೂಪಿಸುವ ದಾಖಲೆಯೆಂದು ಪರಿಗಣಿಸಲು ಬರುವುದಿಲ್ಲ ಹಾಗೂ ಏಕ ನಿವೇಶನ ವಿನ್ಯಾಸ ನಕ್ಷೆ ಅನುಮೋದನೆಯು ಆಸ್ತಿಯ ಹಕ್ಕಿನ ಪ್ರತಿಪಾದನೆಗೆ ದಾಖಲೆಯಾಗುವುದಿಲ್ಲ. ಭೂಸುಧಾರಣೆ ಕಾಯ್ದೆಯಡಿ / ಭೂಕಂದಾಯ ಕಾಯ್ದೆ 1964 ರ ಕಲಂ 136 (3) ರ ಅಡಿಯಲ್ಲಾಗಲೀ ಪ್ರಕರಣಗಳು ಬಾಕಿ ಇದ್ದಲ್ಲಿ ಏಕ ನಿವೇಶನ ವಿನ್ಯಾಸ ನಕ್ಷೆ ಅನುಮೋದನೆಯು ಅಂತಿಮ ಆದೇಶಕ್ಕೆ ಒಳಪಟ್ಟಿರುತ್ತದೆ. ಈ ಬಗ್ಗೆ ಅರ್ಜಿದಾರರು ನ್ಯಾಯಾಲಯದ ಅಂತಿಮ ಆದೇಶಕ್ಕೆ ಬದ್ಧರಾಗಿರತಕ್ಕದ್ದು ಮತ್ತು ಯಾವುದೇ ಸಂದರ್ಭದಲ್ಲಿ ಏಕ ನಿವೇಶನ ವಿನ್ಯಾಸ ನಕ್ಷೆ ಅನುಮೋದನೆ ಸಂಬಂಧ ಪಾವತಿಸಿದ್ದ ಶುಲ್ಕಗಳನ್ನು ಹಿಂತಿರುಗಿಸಲಾಗುವುದಿಲ್ಲ. |
| 8 | ಅರ್ಜಿದಾರರು ಉದ್ದೇಶಿರುವ ಜಮೀನಿನಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಥವಾ ಅನ್ಯಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದುಬಂದಲ್ಲಿ ಅಂತಹ ಸಂದರ್ಭದಲ್ಲಿ ಪ್ರಾಧಿಕಾರಕ್ಕೆ ಏಕ ನಿವೇಶನ ವಿನ್ಯಾಸ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ರದ್ದುಪಡಿಸಲು ಅಧಿಕಾರವಿರುತ್ತದೆ. |
| 10 | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಮುಂದೆ ಸೂಚಿಸಬಹುದಾದ ಎಲ್ಲಾ ತಾಂತ್ರಿಕ ವಿಷಯಗಳಿಗೆ ಹಾಗೂ ಶುಲ್ಕಗಳನ್ನು ತುಂಬುವುದರ ನಿರ್ಣಯಕ್ಕೆ ಅರ್ಜಿದಾರರು ಬದ್ಧರಾಗಿರುವುದು. |
| 11 | ಪ್ರಾಧಿಕಾರವು ಆಗಿಂದಾಗ್ಗೆ ವಿಧಿಸುವ ಇತರೆ ಷರತ್ತುಗಳಿಗೆ ಬದ್ಧರಾಗಿರುವುದು. |
| 12 | ಪ್ರಸ್ತಾವನೆಯಲ್ಲಿ ಜಮೀನುಗಳ ಕುರಿತು ಯಾವುದೇ ವ್ಯಾಜ್ಯ /ಪ್ರಕರಣ/ತಕರಾರುಗಳು ಇರುವ ಕುರಿತು ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು ರವರಿಂದ ವ್ಯತಿರಿಕ್ತವಾಗಿ ವರದಿಯು ಸ್ವೀಕೃತವಾದಲ್ಲಿ ಅನುಮೋದಿತ ವಸತಿ ಏಕ ವಿನ್ಯಾಸ ನಕ್ಷೆಯನ್ನು ರದ್ದುಪಡಿಸುವ ಷರತ್ತಿಗೆ ಒಳಪಟ್ಟಿರುತ್ತದೆ. |

ಮೇಲ್ಕಂಡ ಷರತ್ತುಗಳಿಗೊಳಪಟ್ಟು, ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಹಾಡೋ ಸಿದ್ದಾಪುರ ಗ್ರಾಮದ ಸರ್ವೆ ನಂ. 56 ರಲ್ಲಿ 3ಎ-15ಗುಂ ವಿಸ್ತೀರ್ಣದ ವಿಸ್ತೀರ್ಣದ ಪೈಕಿ ಸ್ಥಳದಲ್ಲಿ

ವಿಷಯ: ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಹಾಡೋ ಸಿದ್ದಾಪುರ ಗ್ರಾಮದ ಸರ್ವೆ ನಂ. 56 ರಲ್ಲಿ 3ಎ-15ಗುಂ ವಿಸ್ತೀರ್ಣದ ಪ್ರದೇಶಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17 ರ ಅಡಿಯಲ್ಲಿ ವಸತಿ ಉದ್ದೇಶದ ಏಕ ನಿವೇಶನ ವಿನ್ಯಾಸ ನಕ್ಷೆಗೆ M/s. Sobha Limited GPA Holder for Smt. Kumudha Kumar Babu Regd & Corporate Office ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.

---

ಲಭ್ಯವಿರುವಂತೆ 3ಎ-12.3ಗುಂ ಪ್ರದೇಶಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17 ರ ಅಡಿಯಲ್ಲಿ ಏಕ ನಿವೇಶನ ವಸತಿ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡಲಾಗಿದೆ.

ನಗರ ಯೋಜಕ ಸದಸ್ಯರು
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು

**ಇವರಿಗೆ,**

M/s. Sobha Limited GPA Holder for
Smt. Kumudha Kumar Babu Regd & Corporate Office,
Sarjapur-Marathalli ORR, Devarabeesanahalli,
Bangalore-560 103.